# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST | ಇದು ಸುದ್ದಿ ವಿಲಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 172 | Pages. 2 | Date: 16-06-2026, TUESDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 172 - ಪುಟಗಳು : 2 | 16-06-2026 | ಮಂಗಳವಾರ | Ph: 8762954248 | ದರ : ₹1


# ಮತಗಟ್ಟೆ ಬೂತ್ ಏಜೆಂಟ್ ನೇಮಕಕ್ಕೆ ವಿಳಂಬ ಬೇಡ

## ಎಸ್‌ಐಆರ್ ಕುರಿತು ಜಿಲ್ಲಾಧಿಕಾರಿ ಮಾಹಿತಿ | ಸಕಲೇಶಪುರದಲ್ಲಿ ತರಬೇತಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯು ನಡೆಯುತ್ತಿದ್ದು, ಎಲ್ಲಾ ರಾಜಕೀಯ ಪಕ್ಷಗಳು ಬೂತ್ ಮಟ್ಟದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆಗೆ ಸಹಕಾರಿಯಾಗುವಂತೆ ಏಜೆಂಟ್‌ರ ನೇಮಕ ಮಾಡುವಂತೆ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಸೂಚಿಸಿದರು.

ಸಕಲೇಶಪುರದ ಗುರುವೇಗೌಡ ಕಲ್ಯಾಣ ಮಂಟಪದಲ್ಲಿ ಸೋಮವಾರ ಆಯೋಜಿಸಿದ್ದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಕುರಿತು ತರಬೇತಿ ಕಾರ್ಯಕ್ರಮದಲ್ಲಿ ಮಾತನಾಡಿ, ಕೇಂದ್ರ ಚುನಾವಣಾ ಆಯೋಗವು ಲೋಕಸಭಾ ಮತ್ತು ವಿಧಾನಸಭಾ ಚುನಾವಣೆ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಮತದಾರರ ಪಟ್ಟಿ ವಿಶೇಷ ಸಮಗ್ರ ಮತದಾರರ ಪರಿಷ್ಕರಣೆ ಪಟ್ಟಿ ತಯಾರಿಸುವ ಪ್ರಕ್ರಿಯೆ ನಡೆಸುತ್ತಿದೆ.

ಈ ನಿಟ್ಟಿನಲ್ಲಿ ಎಲ್ಲಾ ರಾಜಕೀಯ ಪಕ್ಷಗಳು ಪ್ರತಿ ಬೂತ್‌ಗೆ ಮತದಾರರ ಏಜೆಂಟ್ ನೇಮಕ ಮಾಡಿ ಅದರ ಪಟ್ಟಿ ನೀಡುವ ಮೂಲಕ ಆರೋಗ್ಯಕರ ಮತದಾರರ ಪಟ್ಟಿ ತಯಾರಿಸಲು ಸಹಕಾರ ನೀಡಬೇಕು. ಯಾವುದೇ ಪ್ರಜೆಯು ಮತದಾನದಿಂದ ವಂಚಿತರಾಗದಂತೆ ಗಮನ ಹರಿಸಬೇಕು



ಎಂದು ತಿಳಿಸಿದರು.

ಪ್ರಜಾ ಪ್ರತಿನಿಧಿ ಕಾಯ್ದೆ ಅಡಿಯಲ್ಲಿ ಮತದಾರರ ಪಟ್ಟಿ ತಯಾರಿಸುವುದು ಸಂವಿಧಾನಾತ್ಮಕ ಕರ್ತವ್ಯ.

ಈ ನಿಟ್ಟಿನಲ್ಲಿ ದೇಶದಾದ್ಯಂತ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ನಡೆಯುತ್ತಿದ್ದು, 2025ರ ಮತದಾರರ ಪಟ್ಟಿಯಲ್ಲಿರುವ ಹೆಸರುಗಳಿಗೆ ಸಂಬಂಧಿಸಿ 2002 ರಲ್ಲಿರುವ ಮತದಾರರ ಪಟ್ಟಿಯ ಮತದಾರರ ಕುಟುಂಬದ ಸಂತತಿಗಳಾಗಿ ಮ್ಯಾಪಿಂಗ್ ಮಾಡಿ ಲಿಂಕ್ ಮಾಡಲಾಗುತ್ತಿದೆ ಎಂದು ತಿಳಿಸಿದರು.

**ಮತಗಟ್ಟೆ ಹೆಚ್ಚಳಕ್ಕೆ ಅವಕಾಶವಿದೆ**

ಮ್ಯಾಪಿಂಗ್‌ನಲ್ಲಿ ಸಿಗದೆ ಇರುವವರಿಗೆ ಬೂತ್ ಮಟ್ಟದ ಅಧಿಕಾರಿಗಳು ನೋಟಿಸ್ ನೀಡಿ ನೋಂದಣಿ ಫಾರಂ ನೀಡುತ್ತಾರೆ.

ಅದನ್ನು ಭರ್ತಿ ಮಾಡಿ ನೀಡಿದ ನಂತರ ಹೆಸರು ಮತ್ತು ಫೋಟೋ ತಾಳೆಯಾಗುತ್ತಿರುವುದನ್ನು ಪರಿಶೀಲನೆ ಮಾಡಿ ಎರಡು ಕಡೆ ಹೆಸರು ಇದ್ದಲ್ಲಿ ಯಾವ ಸ್ಥಳದಲ್ಲಿ ಬೇಕು ಎಂದು ಒಪ್ಪಿಗೆ ನೀಡಿದ ನಂತರ ನಿಯಮಾನುಸಾರ ಒಂದು ಕಡೆ ಮತದಾರರ ಪಟ್ಟಿಯಲ್ಲಿ ಹೆಸರು ಡಿಲೀಟ್ ಮಾಡಲಾಗುವುದು ಎಂದು ತಿಳಿಸಿದರು.

ಪೂರ್ವ ತಯಾರಿಗಾಗಿ ಮತಗಟ್ಟೆ ಅಧಿಕಾರಿಗಳು ಹಾಗೂ ಮತಗಟ್ಟೆ ಏಜೆಂಟ್‌ಗಳಿಗೆ ತರಬೇತಿ ನೀಡಲಾಗುತ್ತಿದೆ, ಜೂನ್ 30 ರಿಂದ ಜುಲೈ 29ರ ವರೆಗೆ ಬಿಎಲ್‌ಒಗಳು ಮನೆ ಮನೆಗೆ ಭೇಟಿ ನೀಡಿ ಈಗಾಗಲೇ ಮುದ್ರಿತವಾಗಿರುವ ಎನ್ಯೂಮರೇಷನ ನಮೂನೆ ನೀಡುತ್ತಾರೆ.

ಅದನ್ನು ಭರ್ತಿ ಮಾಡಿ ತಮ್ಮ ಪ್ರಸ್ತುತ ಭಾವಚಿತ್ರವನ್ನು ಅಂಟಿಸಿ ಕಡ್ಡಾಯವಾಗಿ ಸಹಿ ಮಾಡಿ ಬಿಎಲ್‌ಒಗಳಿಗೆ ಹಿಂದಿರುಗಿಸಬೇಕು.

ಒಂದು ಪ್ರತಿಯನ್ನು ತಮ್ಮ ಬಳಿಯೇ ಇರಿಸಿಕೊಳ್ಳಬೇಕು ಎಂದು ತಿಳಿಸಿದರು.

ಸಕಲೇಶಪುರ ಉಪವಿಭಾಗಾಧಿಕಾರಿ ಹುಲ್ಲುಮನಿ ತಿಮ್ಮಣ್ಣ, ತಹಸೀಲ್ದಾರ್ ಸುಪ್ರೀಯಾ ಹಾಗೂ ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಉಪಸ್ಥಿತರಿದ್ದರು.

### ಮತಗಟ್ಟೆ ಹೆಚ್ಚು ಬೇಕಿದ್ದರೆ ಪ್ರಸ್ತಾವನೆ ಸಲ್ಲಿಸಿ

ಕರುಡು ಮತದಾರರ ಪಟ್ಟಿಯನ್ನು ಆ. 5 ರಂದು ಪ್ರಕಟಿಸಲಾಗುತ್ತದೆ. ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಆ. 5 ರಿಂದ ಸೆ. 4ರ ವರೆಗೆ, ಹಕ್ಕು ಮತ್ತು ಆಕ್ಷೇಪಣೆಗಳ ತಿರುವಳಿ ಆ. 5 ರಿಂದ ಅ. 3ರವರೆಗೆ, ಅಂತಿಮ ಮತದಾರರ ಪಟ್ಟಿಯನ್ನು ಅ. 7ರಂದು ಪ್ರಕಟಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಹೇಳಿದರು.

ಜೋಡಣೆ ಮಾಡದೇ ಇರುವ ಮತದಾರರು ಆಯೋಗವು ನಿಗದಿಪಡಿಸಿರುವ 12 ವಿವಿಧ ದಾಖಲೆಗಳಲ್ಲಿ ಒಂದು ದಾಖಲೆ ನೀಡಿ ಮತದಾರರ ಪಟ್ಟಿಗೆ ಹೆಸರು ಸೇರಿಸಲು ಹೊಸ ಅರ್ಜಿ ನೀಡಬಹುದು ಎಂದು ತಿಳಿಸಿದರು.

ವರ್ಷದಲ್ಲಿ ನಾಲ್ಕು ಬಾರಿ ಜನವರಿ, ಏಪ್ರಿಲ್, ಜುಲೈ ಮತ್ತು ಅಕ್ಟೋಬರ್ 1 ರಂದು ಮತದಾರರ ಪಟ್ಟಿ ಪರಿಷ್ಕರಣೆ ಆಗುತ್ತದೆ.

ಆ ಸಂದರ್ಭದಲ್ಲಿ 18 ವರ್ಷ ಪೂರೈಸಿದವರು ಹೊಸ ಅರ್ಜಿ ಸಲ್ಲಿಸಬಹುದಾಗಿದೆ. ಮತಗಟ್ಟೆ ಪರಿಷ್ಕರಣೆಗೆ ಅವಕಾಶವಿದ್ದು, ಅಧಿಕ ಸಂಖ್ಯೆಯಲ್ಲಿ ಮತದಾರರು ಒಂದೇ ಬೂತ್‌ನಲ್ಲಿ ಮತದಾನ ಮಾಡಲು ಸಮಯ ಹೆಚ್ಚು ತೆಗೆದುಕೊಳ್ಳುತ್ತಿದ್ದಲ್ಲಿ ಪ್ರಸ್ತಾವನೆ ಸಲ್ಲಿಸಲು ತಿಳಿಸಿದರು.

# ಶಿವಲಿಂಗೇಗೌಡರಿಗೆ ಸಚಿವ ಸ್ಥಾನ ನೀಡುವಂತೆ ಆಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಚನ್ನರಾಯಪಟ್ಟಣ: ಜಿಲ್ಲೆಯ ಏಕೈಕ ಕಾಂಗ್ರೆಸ್ ಶಾಸಕ ಕೆ.ಎಂ. ಶಿವಲಿಂಗೇಗೌಡ ಅವರಿಗೆ ಸಚಿವ ಸ್ಥಾನ ಹಾಗೂ ಜಿಲ್ಲಾ ಉಸ್ತುವಾರಿ ಜವಾಬ್ದಾರಿ ನೀಡಬೇಕು ಎಂದು ಸಿ.ಎಸ್.ಪುಟ್ಟೇಗೌಡ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿದ ಅವರು, ಹಾಸನ ಜಿಲ್ಲೆಯು ರಾಜಕೀಯವಾಗಿ ನಿರ್ಲಕ್ಷ್ಯಕ್ಕೆ ಒಳಗಾಗಿದ್ದು ತಬ್ಬಲಿಯ ಸ್ಥಿತಿ ನಿರ್ಮಾಣವಾಗಿದೆ. ಮಾಜಿ ಸಚಿವ ದಿ. ಹೆಚ್.ಸಿ.ಶ್ರೀಕಂಠಯ್ಯ ಅವರ ಆಡಳಿತದ ನಂತರ ಜಿಲ್ಲಾ ಕಾಂಗ್ರೆಸ್‌ನಲ್ಲಿ ಸಮರ್ಥ ರಾಜಕೀಯ ನಾಯಕತ್ವದ ಕೊರತೆ ಉಂಟಾಗಿದೆ. ಜಿಲ್ಲೆ ಅಭಿವೃದ್ಧಿಯ ಹಾದಿಯಲ್ಲಿ ಹಿಂದುಳಿದಿದೆ ಎಂದರು.




ಹಲವು ವರ್ಷಗಳಿಂದ ಸಮರ್ಪಕ ರಾಜಕೀಯ ಪ್ರತಿನಿಧಿತ್ವ ಹಾಗೂ ಆಡಳಿತಾತ್ಮಕ ಶಕ್ತಿಯಿಂದ ಜಿಲ್ಲೆ ವಂಚಿತವಾಗಿದೆ. ಕಾಂಗ್ರೆಸ್ ಪಕ್ಷವನ್ನು ಮತ್ತಷ್ಟು ಬಲಪಡಿಸಲು ಶಿವಲಿಂಗೇಗೌಡರಿಗೆ ಸಚಿವ ಸ್ಥಾನ ನೀಡಬೇಕು ಎಂದರು.

ಶಿವಲಿಂಗೇಗೌಡ ಅವರು ಕ್ಷೇತ್ರದಲ್ಲಿ ನಿರಂತರವಾಗಿ ಜನಪರ ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದು ರೈತರು, ಬಡವರು ಹಾಗೂ ಸಾಮಾನ್ಯ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಗುಣ ಹೊಂದಿದ್ದಾರೆ. ತೆಂಗು ಬೆಳೆಗೆ ಪರಿಹಾರ ತರುವ ಮೂಲಕ ರೈತರ ಬದುಕನ್ನು ಸದೃಢಗೊಳಿಸಿದ ಹೆಗ್ಗಳಿಕೆ ಅವರಿಗೆ ಸಲ್ಲುತ್ತದೆ ಎಂದು ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಡಳಿತವನ್ನು ಶ್ಲಾಘಿಸಿದ ಪುಟ್ಟೇಗೌಡರು, ಬಡವರ ಪರ ಯೋಜನೆ ಹಾಗು ಅಭಿವೃದ್ಧಿ ಕಾರ್ಯಗಳ ಮೂಲಕ ರಾಜ್ಯ ಸರ್ಕಾರ ಜನಮನ ಗೆದ್ದಿದೆ. ಅವರ ಸೇವೆ ಅನನ್ಯವಾದುದು ಎಂದು ಹೇಳಿದರು.

ಹಿರೀಸಾವೆ ಏತ ನೀರಾವರಿ ಯೋಜನೆ, ತೋಟಿಕೆರೆ ಏತ ನೀರಾವರಿ, ದಿಡಗ ಏತ ನೀರಾವರಿ ಯೋಜನೆ ಕೈಗೊಂಡಿರುವುದು ಕಾಂಗ್ರೆಸ್ ಸರ್ಕಾರ. ಜಿಲ್ಲೆಯ ನೀರಾವರಿ ಯೋಜನೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ರೈತರ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಬೇಕೆಂದರೆ ಸ್ಥಳೀಯ ಶಾಸಕರಿಗೆ ಸಚಿವ ಸಂಪುಟದಲ್ಲಿ ಸ್ಥಾನ ಸಿಗಬೇಕೆಂದು ಪ್ರತಿಪಾದಿಸಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಂಜೇಗೌಡ, ಯುವ ಮುಖಂಡ ಗಿರೀಶ್ ಮತ್ತಿತರರಿದ್ದರು.

# ಡೀಮ್ಡ್ ಅರಣ್ಯ ಪ್ರದೇಶದ 22 ಎಕರೆ ಒತ್ತುವರಿ ತೆರವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಸಕಲೇಶಪುರ: ಪಶ್ಚಿಮ ಘಟ್ಟ ವ್ಯಾಪ್ತಿಯ ಡೀಮ್ಡ್ ಅರಣ್ಯ ಪ್ರದೇಶದಲ್ಲಿ 22 ಎಕರೆ ಒತ್ತುವರಿಯನ್ನು ಅರಣ್ಯ ಇಲಾಖೆ ಅಧಿಕಾರಿಗಳು ಸೋಮವಾರ ತೆರವುಗೊಳಿಸಿದರು.

ಸಕಲೇಶಪುರ ಉಪ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಮಾರ್ಗದರ್ಶನದಲ್ಲಿ ವಲಯ ಅರಣ್ಯಾಧಿಕಾರಿ, ಸಿಬ್ಬಂದಿ ಹಾಗೂ ಆರ್‌ಆರ್‌ಟಿ (ರ್‍ಯಾಪಿಡ್ ರೆಸ್ಪಾನ್ಸ್ ತಂಡ) ಸದಸ್ಯರು ಕಾರ್ಯಾಚರಣೆ ನಡೆಸಿದರು.

ತಾಲೂಕಿನ ಹಾನುಬಾಳು ಹೋಬಳಿಯ ಹೊಡಚಹಳ್ಳಿ ಗ್ರಾಮದ ಸರ್ವೆ ನಂ. 21 ಮತ್ತು 28ರಲ್ಲಿ ಸಚಿನ್ ಹಾಗೂ ರಜಿತ್ ಎಂಬುವರು ಸರ್ಕಾರಕ್ಕೆ



ಸೇರಿದ ಅರಣ್ಯ ಇಲಾಖೆಯ ಡೀಮ್ಡ್ ಅರಣ್ಯ ಪ್ರದೇಶದ ಸುಮಾರು 22 ಎಕರೆ ಜಾಗವನ್ನು ಒತ್ತುವರಿ ಮಾಡಿಕೊಂಡು ತಂತಿಬೇಲಿ ನಿರ್ಮಾಣ ಮಾಡಿರುವುದು ಇಲಾಖೆಯ ಗಮನಕ್ಕೆ ಬಂದಿತ್ತು.

ಈ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆ ಜೂನ್ 10ರಂದು ಸಂಬಂಧಪಟ್ಟ ವ್ಯಕ್ತಿಗೆ ನೋಟಿಸ್ ಜಾರಿ ಮಾಡಿ, ಜಮೀನಿನ ಕುರಿತಂತೆ ಸೂಕ್ತ ದಾಖಲೆಗಳನ್ನು ಸಲ್ಲಿಸುವಂತೆ ಸೂಚಿಸಿತ್ತು. ಆದರೆ, ಯಾವುದೇ ದಾಖಲೆಗಳನ್ನು ಸಲ್ಲಿಸಲು ವಿಫಲವಾದ ಹಿನ್ನೆಲೆ ಇಲಾಖೆ ಕಾನೂನು ಪ್ರಕ್ರಿಯೆ ಅನುಸರಿಸಿ ತೆರವು ಕಾರ್ಯಾಚರಣೆ ಕೈಗೊಂಡಿತು.

ಸೋಮವಾರ ನಡೆದ ಕಾರ್ಯಾಚರಣೆಯಲ್ಲಿ ಅಕ್ರಮವಾಗಿ ಅಳವಡಿಸಿದ್ದ ಕಂಬಗಳನ್ನು ತೆರವುಗೊಳಿಸಿ, ತಂತಿಗಳನ್ನು ಇಲಾಖೆಯ ಪರವಾಗಿ ಅಮಾನತ್ತುಪಡಿಸಲಾಯಿತು. ಜೊತೆಗೆ ಡೀಮ್ಡ್ ಅರಣ್ಯ ಪ್ರದೇಶವನ್ನು ಮರಳಿ ಇಲಾಖೆಯ ವಶಕ್ಕೆ ಪಡೆಯಲಾಯಿತು.

ಆರ್‌ಎಫ್‌ಒ ಹೇಮಂತ್ ಕುಮಾರ್ ನೇತೃತ್ವದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಸುಮಾರು 70ಕ್ಕೂ ಹೆಚ್ಚು ಅರಣ್ಯ ಸಿಬ್ಬಂದಿ ಭಾಗವಹಿಸಿದ್ದರು. ಉಪವಲಯ ಅರಣ್ಯಾಧಿಕಾರಿಗಳಾದ ಮಾದೇಶಪ್ಪ, ಮಂಜುನಾಥ್, ಅರ್ಜುನ್, ಧನಂಜಯ ಹಾಗೂ ಗಸ್ತು ಅರಣ್ಯ ಪಾಲಕರಾದ ದೇವರಾಜು, ಉಮೇಶ್, ಯೋಗೇಶ್, ಅರುಣ್, ಲೋಕೇಶ್ ಪಾಲ್ಗೊಂಡಿದ್ದರು.

# ರಂಗ ಅಭಿನಯ ತರಬೇತಿ ಶಿಬಿರ ಜೂ. 18ರಿಂದ




**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಜೂ. 18 ರಿಂದ 28ರ ವರೆಗೆ ರಂಗ ಅಭಿನಯ ತರಬೇತಿ ಶಿಬಿರ ಆಯೋಜಿಸಲಾಗಿದೆ ಎಂದು ರಂಗಾಯಣ ಕಲಾವಿದ ಮಧುಸೂದನ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿದ ಅವರು, ಸಂಸ್ಕೃತಿ ಟ್ರಸ್ಟ್, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಪ್ರತಿದಿನ ಸಂಜೆ 5 ರಿಂದ ರಾತ್ರಿ 9 ಗಂಟೆ ವರೆಗೆ ಶಿಬಿರ ನಡೆಯಲಿದೆ. 15 ರಿಂದ 50 ವರ್ಷದೊಳಗಿನವರು ಭಾಗವಹಿಸಬಹುದಾಗಿದೆ. ಅಭಿನಯದ ತಾತ್ವಿಕ ಹಾಗು ಪ್ರಾಯೋಗಿಕ ಅಂಶಗಳನ್ನು ಒಳಗೊಂಡ ಸಮಗ್ರ ತರಬೇತಿ ನೀಡಲಾಗುತ್ತ ಎಂದರು.

ಶಿಬಿರದಲ್ಲಿ ಆಂಗಿಕ, ವಾಚಿಕ ಮತ್ತು ಸಾತ್ವಿಕ ಅಭಿನಯ, ಧ್ವನಿ ನಿಯಂತ್ರಣ, ದೈಹಿಕ ಚಲನಶೀಲತೆ, ವೇದಿಕೆ ಮೇಲಿನ ಅಭಿವ್ಯಕ್ತಿ, ಪಾತ್ರದ ಒಳನೋಟ ಹಾಗೂ ತಂಡದೊಂದಿಗೆ ಕೆಲಸ ಮಾಡುವ ಕೌಶಲಗಳ ಕುರಿತು ವಿಶೇಷ ತರಬೇತಿ ನೀಡಲಾಗುತ್ತದೆ. ರಂಗಾಯಣ ಮತ್ತು ನೀನಾಸಂನಲ್ಲಿ ತರಬೇತಿ ಪಡೆದ ಅನುಭವಿ ರಂಗಕರ್ಮಿಗಳು ತರಗತಿ ನಡೆಸಲಿದ್ದು, ಶಿಬಿರಾರ್ಥಿಗಳಿಗೆ ನೇರ ಅಭ್ಯಾಸದ ಮೂಲಕ ಕಲಿಕೆಯ ಅವಕಾಶ ಸಿಗಲಿದೆ ಎಂದರು.

ಮೈಸೂರು ರಂಗಾಯಣದಲ್ಲಿ ಶಿಕ್ಷಣ ಪಡೆದು ಹಲವು ವರ್ಷಗಳಿಂದ ರಂಗಭೂಮಿಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಪ್ರದೀಪ್ ರಂಗಾಯಣ ಶಿಬಿರದ ನಿರ್ದೇಶಕರಾಗಿ ಕಾರ್ಯನಿರ್ವಹಿಸಲಿದ್ದಾರೆ. ಅವರ ಮಾರ್ಗದರ್ಶನದಲ್ಲಿ ನಡೆಯುವ ಈ ಕಾರ್ಯಾಗಾರ ಹೊಸ ಕಲಾವಿದರಿಗೆ ರಂಗಭೂಮಿಯ ಮೂಲಭೂತ ಅಂಶಗಳನ್ನು ಅರಿಯಲು ನೆರವಾಗಲಿದೆ ಎಂದು ಹೇಳಿದರು.

ಶಿಬಿರದಲ್ಲಿ ಕೇವಲ 20 ಮಂದಿಗೆ ಮಾತ್ರ ಪ್ರವೇಶ ಅವಕಾಶ ಇದ್ದು, ಪ್ರವೇಶ ಶುಲ್ಕವಾಗಿ 500 ರೂ. ನಿಗದಿಪಡಿಸಲಾಗಿದೆ. ಮೊದಲು ನೋಂದಣಿ ಮಾಡಿಕೊಳ್ಳುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುತ್ತದೆ. ಆಸಕ್ತರು ಮಾಹಿತಿಗಾಗಿ 7676443338 ಸಂಖ್ಯೆಗೆ ಸಂಪರ್ಕಿಸಿ ತಮ್ಮ ಹೆಸರು ನೋಂದಾಯಿಸಿಕೊಳ್ಳುವಂತೆ ಕೋರಿದರು.


ಸುದ್ದಿಗೋಷ್ಠಿಯಲ್ಲಿ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಗೌರವ ಕಾರ್ಯದರ್ಶಿ ಬಿ.ಆರ್. ಬೊಮ್ಮೇಗೌಡ, ಸಂಘಟನಾ ಕಾರ್ಯದರ್ಶಿ ಆರ್.ಬಿ.ಶಂಕರ್, ತಾಲ್ಲೂಕು ಅಧ್ಯಕ್ಷ ಮಮತೇಶ್ ಇದ್ದರು.

# ಶಿಕ್ಷಣವನ್ನು ದೀಕ್ಷೆಯಾಗಿ ಸ್ವೀಕರಿಸಲು ಸಲಹೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಚನ್ನರಾಯಪಟ್ಟಣ: ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಶಿಕ್ಷಣವೇ ಭದ್ರ ಬುನಾದಿಯಾಗಿದ್ದು, ವಿದ್ಯಾರ್ಥಿಗಳು ಶಿಸ್ತು, ಶ್ರದ್ಧೆ ಹಾಗು ಭಕ್ತಿಯಿಂದ ವಿದ್ಯೆಯನ್ನು ದೀಕ್ಷೆಯಾಗಿ ಸ್ವೀಕರಿಸಬೇಕು ಎಂದು ಶೃಂಗೇರಿ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿ ಹೆಚ್.ಎಂ.ವರಲಕ್ಷ್ಮಿ ಸಲಹೆ ನೀಡಿದರು.

ತಾಲ್ಲೂಕು ಜಿನ್ನೇನಹಳ್ಳಿ ಸರ್ಕಾರಿ ಪ್ರೌಢಶಾಲೆಯ ಆವರಣದಲ್ಲಿ 2000-2003ನೇ ಸಾಲಿನ ವಿದ್ಯಾರ್ಥಿಗಳಿಂದ ಏರ್ಪಡಿಸಿದ್ದ



ಗುರುವಂದನೆ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಷ್ಟಪಟ್ಟು ಶಿಕ್ಷಣ ಪಡೆಯುವ ಬದಲು ಇಷ್ಟದಿಂದ ಸ್ವೀಕರಿಸಿದರೆ ನಂತರದ ಬದುಕು ಸುಂದರವಾಗಿರುತ್ತದೆ ಎಂದು ಹೇಳಿದರು.

ಸರ್ಕಾರಿ ಅಥವಾ ಖಾಸಗಿ ಸಂಸ್ಥೆಗಳ ಉನ್ನತ ಹುದ್ದೆಗಳಿಗೆ ಆಸೆಪಟ್ಟು ಶಿಕ್ಷಣ ಪಡೆಯಬಾರದು. ಜ್ಞಾನಾರ್ಜನೆಗಾಗಿ ಓದುವುದು ಮುಖ್ಯ. ಪ್ರಜ್ಞಾವಂತರು ಹೆಚ್ಚಿದಂತೆಲ್ಲಾ ಸಮಾಜವು ಪ್ರಗತಿಯತ್ತ ಸಾಗಲಿದೆ. ಸಮಾಜ ಬದಲಾವಣೆ ಹೊಂದಿದರೆ ದೇಶ ಉನ್ನತ ಮಟ್ಟದಲ್ಲಿ ಅಭಿವೃದ್ಧಿ ಕಾಣುವ ಮೂಲಕ ವಿಶ್ವಮಟ್ಟದಲ್ಲಿ ಗುರುತಿಸಿಕೊಳ್ಳಲು ಸಾಧ್ಯ ಎಂದರು.

ಶಿಕ್ಷಣ, ಸಾಹಿತ್ಯ, ಕ್ರೀಡೆ, ವಿಜ್ಞಾನ ಸೇರಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಬಹುತೇಕ ಮಹನೀಯರು ಸರ್ಕಾರಿ ಶಾಲೆಗಳಲ್ಲಿಯೇ ಓದಿರುವವರು ಎಂಬುದು ಹೆಮ್ಮೆಯ ವಿಚಾರ ಎಂದರು.

ನಿವೃತ್ತ ಶಿಕ್ಷಕರಾದ ಎನ್. ಎನ್.ಪುಟ್ಟಸ್ವಾಮಿ, ಎಸ್.ಎಲ್. ವೇಣುಗೋಪಾಲ್, ಉಪನ್ಯಾಸಕರಾದ ಜೆ.ಹೆಚ್.ರೇಖಾ ಸಿಂಗ್, ಮೋಹಿನುದ್ದೀನ್ ಅಹಮದ್, ಯೋಗ ಶಿಕ್ಷಕಿ ಶಾರದಮ್ಮ, ನಿವೃತ್ತ ದೈಹಿಕ ಶಿಕ್ಷಣ ಶಿಕ್ಷಕ ಸಿಗಲಿಂಗಯ್ಯ ಅವರಿಗೆ ಗುರುವಂದನೆ ಸಲ್ಲಿಸಲಾಯಿತು.

2000-2003ನೇ ಸಾಲಿನ ವಿದ್ಯಾರ್ಥಿಗಳಾದ ಹೆಚ್.ಜಿ.ಮಂಜೇಗೌಡ, ಹೆಚ್.ಎಂ.ಪರಮೇಶ್, ಮಂಜುನಾಥ್, ಕೆ.ಎಸ್.ಧನಂಜಯ, ಕಿರಣ್, ತಮ್ಮಣ್ಣಗೌಡ, ಜೆ.ಟಿ.ಮಂಜುನಾಥ್, ಚೈತ್ರ, ಎಂ.ವಿ.ಶೃತಿ ಇದ್ದರು.

# ಎತ್ತಿನಹೊಳೆಯಿಂದ ಕಾಲುವೆಗೆ ನೀರು: ಎಚ್ಚರಿಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಬಯಲು ಸೀಮೆ ಜಿಲ್ಲೆಗಳಿಗೆ ಕುಡಿಯುವ ನೀರು ಕಲ್ಪಿಸುವ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಎತ್ತಿನಹೊಳೆ ಯೋಜನೆಯಡಿ ಕಾಲುವೆಗೆ ನೀರು ಬಿಡಲಾಗುತ್ತಿದ್ದು ಅಚ್ಚುಕಟ್ಟು ಪ್ರದೇಶದ ಜನರು ಎಚ್ಚರದಿಂದ ಇರಲು ಸೂಚಿಸಿದೆ.

ಸಕಲೇಶಪುರ, ಬೇಲೂರು ಹಾಗೂ ಆಲೂರು ತಾಲೂಕು ವ್ಯಾಪ್ತಿಯಲ್ಲಿ ಯೋಜನೆಯ ಗುರುತ್ವಾ ಕಾಲುವೆ ಸರಪಳಿ: 0 ಕಿ.ಮೀ.ಯಿಂದ 32.550 ಕಿ.ಮೀ. ವರೆಗಿನ ಕಾಮಗಾರಿಯು ಪೂರ್ಣಗೊಂಡಿದೆ. ಪ್ರಸಕ್ತ ಸಾಲಿನ ಮುಂಗಾರಿನಲ್ಲಿ ನೀರನ್ನೆತ್ತಿ ಗುರುತ್ವಾ ಕಾಲುವೆಗೆ ಬಿಡಲು ಉದ್ದೇಶಿಸಲಾಗಿದೆ. ಪ್ರಸಕ್ತ ಸಾಲಿನ ಮಳೆಯಿಂದಾಗಿ ಗುಡ್ಡ ಪ್ರದೇಶದಿಂದ ಹಾಗೂ ಹೊಲ ತೋಟಗಳಿಂದ ಹೆಚ್ಚುವರಿ ನೀರು ಎತ್ತಿನಹೊಳೆ ಗುರುತ್ವಾ ಕಾಲುವೆಗೆ ಸೇರುವ ಸಂಭವವಿರುವುದರಿಂದ ಹಾಗೂ ಪ್ರಸ್ತುತ ಎತ್ತಿನಹೊಳೆ ಗುರುತ್ವಾ ಕಾಲುವೆ 32.550 ಕಿ.ಮೀ. ವರೆಗಿನ ಕಾಮಗಾರಿ ಪೂರ್ಣಗೊಂಡಿದ್ದು, ನೀರಿನ ಚಾಲನೆ ಮತ್ತು ಮಳೆಯಿಂದ ಬರುತ್ತಿರುವ ಹೆಚ್ಚುವರಿ ನೀರನ್ನು ಕಾಲುವೆಯ ಮುಖಾಂತರ ಹೊರ ಹರಿಸಬೇಕಾಗಿರುವುದರಿಂದ ಸರಪಳಿ: 32.550 ಕಿ.ಮೀ ನಲ್ಲಿ ಅಳವಡಿಸಿರುವ ಎಸ್ಕೇಪ್‌ನಿಂದ ನೀರನ್ನು ಕಾಗೇದಹಳ್ಳ ಮುಖಾಂತರ ಹರಿಸಿ ವೇದಾವತಿ ನದಿಯ ಕೊಳ್ಳಕ್ಕೆ ಬಿಡಬೇಕಾಗಿದೆ ಎಂದು ಅರಸೀಕೆರೆ ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ ಎತ್ತಿನಹೊಳೆ ಯೋಜನಾ ವಿಭಾಗದ ಕಾರ್ಯಪಾಲಕ ಎಂಜಿನಿಯರ್ ತಿಳಿಸಿದ್ದಾರೆ.

ಪ್ರದೇಶದ ವ್ಯಾಪ್ತಿಯಲ್ಲಿ ದನ-ಕರುಗಳನ್ನು ಕಟ್ಟುವುದಾಗಲಿ, ಸಾರ್ವಜನಿಕರು ಸಂಚರಿಸುವುದಾಗಲಿ ಮಾಡಬಾರದು.

ಸಾರ್ವಜನಿಕರ ಆಸ್ತಿ-ಪಾಸ್ತಿ ಮತ್ತು ಪ್ರಾಣಕ್ಕೆ ಹಾನಿಯಾಗುವ ಸಂಭವವಿರುತ್ತದೆ. ಈ ಕುರಿತಂತೆ ಯಾವುದೇ ತರಹದ ನಿರ್ಲಕ್ಷ್ಯಗಳಿಂದ ಅಪಘಾತ ಅಥವಾ ಹಾನಿ ಸಂಭವಿಸಿದರೆ ಅವರೇ ಜವಬ್ದಾರರಾಗಿರುತ್ತಾರೆ ಎಂದು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಯಾರಿಗೆ ಸಿಗಲಿದೆ ಹಾಸನ ಉಸ್ತುವಾರಿ ಸ್ಥಾನ?

## ಜಿಲ್ಲಾ ಕಾಂಗ್ರೆಸ್‌ನಲ್ಲಿ ಹೆಚ್ಚಿದ ಚರ್ಚೆ | ಕೆ.ಎಂ.ಶಿವಲಿಂಗೇಗೌಡರಿಗೆ ಒಲಿಯುತ್ತಾ ಅದೃಷ್ಟ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಸರ್ಕಾರದಲ್ಲಿ ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಯಾರು ಎಂಬ ಕುತೂಹಲ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ.

ಜಿಲ್ಲೆಯ ಏಕೈಕ ಕಾಂಗ್ರೆಸ್ ಶಾಸಕ ಕೆ.ಎಂ.ಶಿವಲಿಂಗೇಗೌಡರಿಗೆ ಅದೃಷ್ಟ ಒಲಿಯುತ್ತದೆಯೇ ಅಥವಾ ಹಿಂದಿನಂತೆ ಹೊರ ಜಿಲ್ಲೆಯವರಿಗೆ ನೀಡಲಾಗುತ್ತದೆಯೇ ಎಂಬ ಪ್ರಶ್ನೆಗಳು ಕಾಂಗ್ರೆಸ್‌ನಲ್ಲಿ ಎದ್ದಿವೆ. ಹಾಸನ ಜಿಲ್ಲಾ ಉಸ್ತುವಾರಿ ಜವಾಬ್ದಾರಿಯನ್ನು ತನಗೆ ನೀಡಬೇಕೆಂದು ಜಿಲ್ಲೆಯ ಏಕೈಕ ಕಾಂಗ್ರೆಸ್ ಶಾಸಕ ಕೆ.ಎಂ.ಶಿವಲಿಂಗೇಗೌಡ ಆಗ್ರಹಿಸುತ್ತಲೇ ಇದ್ದಾರೆ. ಜೆಡಿಎಸ್‌ನಿಂದ ಸತತ ಮೂರು ಬಾರಿ ಗೆಲುವು ಸಾಧಿಸಿದ್ದ ಅವರು 2023ರ ಚುನಾವಣೆಯಲ್ಲಿ ಕಾಂಗ್ರೆಸ್ ಸೇರಿದ್ದರು. ಪಕ್ಷ ಅಧಿಕಾರಕ್ಕೆ ಬಂದರೆ ಸಚಿವ ಸ್ಥಾನ ನೀಡುವ ಖಚಿತ ಭರವಸೆ ನೀಡಲಾಗಿತ್ತು. ಆದರೆ ಮೂಲ ಕಾಂಗ್ರೆಸ್ ನಾಯಕರನ್ನು ಬಿಟ್ಟು ಬೇರೆ ಪಕ್ಷದಿಂದ ಬಂದವರಿಗೆ ಮೊದಲ ಬಾರಿಗೆ ಅವಕಾಶ ನೀಡುವುದು ಬೇಡವೆಂಬ ಮಾನದಂಡ ಅಡ್ಡಬಂದಿದ್ದರಿಂದ ಶಿವಲಿಂಗೇಗೌಡರಿಗೆ ಹಿನ್ನಡೆಯಾಗಿದೆ. ಡಿ.ಕೆ.ಶಿವಕುಮಾರ್ ನೇತೃತ್ವದ ಸರ್ಕಾರದಲ್ಲಾದರೂ ತಮಗೆ ಅದೃಷ್ಟ ಖುಲಾಯಿಸಲಿದೆ ಎಂಬ ನಂಬಿಕೆಯಲ್ಲಿ ಅವರಿದ್ದಾರೆ.

### ಕಾರ್ಯಕರ್ತರಿಗೆ ಸಿಗಲಿ ಅಧಿಕಾರ

ಪಕ್ಷಕ್ಕಾಗಿ ದುಡಿದ್ದೇವೆ ಕೂಲಿ ಕೊಡಿ ಎಂಬ ಪ್ರಸ್ತುತ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಸಹೋದರ ಡಿ.ಕೆ. ಸುರೇಶ್ ಅವರ ಜನಪ್ರಿಯ ವಾಕ್ಯವನ್ನು ಜಿಲ್ಲೆಯ ಕಾಂಗ್ರೆಸ್ ಕಾರ್ಯಕರ್ತರು ಕೇಳುತ್ತಿದ್ದು, ಪಕ್ಷಕ್ಕಾಗಿ ಹಗಲಿರುಳು ದುಡಿದವರಿಗೆ ಪ್ರಾಶಸ್ತ್ಯ ಸಿಗಲಿ ಎಂಬ ಒತ್ತಾಯ ಜೋರಾಗಿದೆ.

ಕಾಂಗ್ರೆಸ್ ನಾಯಕರು ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಸಚಿವ ಸ್ಥಾನಗಳ ರೂಪದಲ್ಲಿ ತಮ್ಮ ರಾಜಕೀಯ ಕೂಲಿ ಪಡೆದಿದ್ದಾರೆ. ನೀವು ನಿಮ್ಮ ಕೂಲಿ ಪಡೆದಂತೆ ನಮಗೂ ನಮ್ಮ ಕೂಲಿ ಕೊಡಿ ಎಂಬ ಧ್ವನಿ ಕಾರ್ಯಕರ್ತರಿಂದ ಕೇಳಿಬರುತ್ತಿದೆ.

ಜೆಡಿಎಸ್ ಭದ್ರಕೋಟೆಯಾಗಿರುವ ಹಾಸನದಲ್ಲಿ ಕಾಂಗ್ರೆಸ್‌ಗೆ ಭದ್ರ ನೆಲೆ ಕಂಡುಕೊಳ್ಳುವುದು ಸುಲಭದ ಮಾತಲ್ಲ. ಅರಸೀಕೆರೆ ವಿಧಾನಸಭಾ ಕ್ಷೇತ್ರ, ಲೋಕಸಭಾ ಸ್ಥಾನ ಹೊರತುಪಡಿಸಿದರೆ ಕಾಂಗ್ರೆಸ್‌ನಿಂದ ಚುನಾಯಿತ ಪ್ರತಿನಿಧಿಗಳು ಇಲ್ಲ. ಮುಂಬರುವ ಗ್ರಾಮ ಪಂಚಾಯಿತಿ, ತಾಲ್ಲೂಕು-ಜಿಲ್ಲಾ ಪಂಚಾಯಿತಿ ಹಾಗೂ ಸ್ಥಳೀಯ ಸಂಸ್ಥೆ ಚುನಾವಣೆಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಗೆದ್ದರಷ್ಟೇ 2028ರ ವಿಧಾನಸಭೆ ಹಾಗೂ ನಂತರದ ಲೋಕಸಭೆ ಚುನಾವಣೆಗೆ ಸಹಕಾರವಾಗಲಿದೆ. ಆದ್ದರಿಂದ ಹೊಸ್ತಿಲಲ್ಲಿರುವ ಚುನಾವಣೆಗೆ ಟಿಕೆಟ್ ನೀಡುವಾಗ ಪಕ್ಷ ನಿಷ್ಠೆ-ಹಿರಿತನ ಪರಿಗಣಿಸಬೇಕೆಂಬುದು ದಶಕಗಳಿಂದ ಪಕ್ಷಕ್ಕಾಗಿ ದುಡಿಯುತ್ತಿರುವ ಕಾರ್ಯಕರ್ತರ ಅಂಬೋಣವಾಗಿದೆ.

ಬಿಜೆಪಿ-ಜೆಡಿಎಸ್ ವಿರುದ್ಧದ ಹೋರಾಟಗಳಲ್ಲಿ ಬೀದಿಗಿಳಿದವರು, ಪ್ರತಿಭಟನೆಗಳಲ್ಲಿ ಪಾಲ್ಗೊಂಡವರು, ಬೂತ್ ಮಟ್ಟದಲ್ಲಿ ಪಕ್ಷ ಕಟ್ಟಿದವರು ಹಾಗು ಅಧಿಕಾರದಲ್ಲಿಲ್ಲದ ಸಂದರ್ಭದಲ್ಲೂ ಪಕ್ಷದ ಧ್ವಜ ಹಿಡಿದು ನಿಂತವರು ಈಗ ತಮ್ಮ ಸೇವೆಗೆ ರಾಜಕೀಯ ಮಾನ್ಯತೆ ಸಿಗಬೇಕೆಂದು ಒತ್ತಾಯಿಸುತ್ತಿದ್ದಾರೆ.

### ಲಾಬಿ ಬಿಟ್ಟು ಶಿಸ್ತಿಗೆ ಬೆಲೆ ಕೊಡಿ

ರಾಜ್ಯದಲ್ಲಿ ಶೀಘ್ರದಲ್ಲೇ ಭರ್ತಿಯಾಗಲಿರುವ ಏಳು ವಿಧಾನ ಪರಿಷತ್ ಸ್ಥಾನ ಹಾಗು ನಿಗಮ-ಮಂಡಳಿಗಳ ಅಧ್ಯಕ್ಷರ ನೇಮಕ ಪ್ರಕ್ರಿಯೆ ಕಾಂಗ್ರೆಸ್ ಸಂಘಟನೆಯ ವಿವಿಧ ಹಂತಗಳ ನಾಯಕರಲ್ಲಿ ನಿರೀಕ್ಷೆ ಮೂಡಿಸಿದೆ.

ಚುನಾವಣೆ ಬಂದಾಗ ಕಾರ್ಯಕರ್ತರು ಬೇಕು, ಹೋರಾಟ ಬಂದಾಗ ಕಾರ್ಯಕರ್ತರು ಬೇಕು, ಪಕ್ಷ ಸಂಕಷ್ಟದಲ್ಲಿದ್ದಾಗ ಕಾರ್ಯಕರ್ತರೇ ಬೆನ್ನೆಲುಬಾಗಿರುತ್ತಾರೆ. ಹೀಗಾಗಿ ಹುದ್ದೆಗಳ ಹಂಚಿಕೆ ವೇಳೆ ಕಾರ್ಯಕರ್ತರನ್ನು ಪಕ್ಷ ಮರೆಯುವುದಿಲ್ಲ ಎಂಬ ವಿಶ್ವಾಸವಿದೆ. ಈಗಾಗಲೇ ನಾಯಕರು ತಮ್ಮ ರಾಜಕೀಯ ಕೂಲಿ ಪಡೆದಿದ್ದಾರೆ. ನಿಷ್ಠಾವಂತ ಕಾರ್ಯಕರ್ತರಿಗೂ ನ್ಯಾಯ ಕೊಡಿಸಬೇಕೆಂದು ಪಕ್ಷದ ಕಾರ್ಯಕರ್ತ ರವಿ ಅಭಿಪ್ರಾಯಪಟ್ಟಿದ್ದಾರೆ.

### ಸ್ಥಳೀಯರಿಗೆ ಉಸ್ತುವಾರಿ ನೀಡಲಿ

ಜಿಲ್ಲಾ ಉಸ್ತುವಾರಿ ಸಚಿವರಾಗಿ ಸ್ಥಳೀಯ ಶಾಸಕ ಕೆ.ಎಂ.ಶಿವಲಿಂಗೇಗೌಡರಿಗೆ ಅವಕಾಶ ಕಲ್ಪಿಸಬೇಕೆಂದು ಜಿಲ್ಲೆಯ ಕಾಂಗ್ರೆಸ್ ಕಾರ್ಯಕರ್ತರು ಆಗ್ರಹಿಸುತ್ತಿದ್ದಾರೆ. ಈ ಸರ್ಕಾರದಲ್ಲಿ ಇಬ್ಬರು ಅಂದರೆ ಕೆ.ಎನ್. ರಾಜಣ್ಣ ಹಾಗು ಕೃಷ್ಣಬೈರೇಗೌಡ ಜಿಲ್ಲೆಯ ಉಸ್ತುವಾರಿ ವಹಿಸಿಕೊಂಡಿದ್ದು ಇಬ್ಬರೂ ಹೊರ ಜಿಲ್ಲೆಯವರಾಗಿರುವುದರಿಂದ ಕಾರ್ಯಕರ್ತರ ಜೊತೆ ಒಡನಾಟ ಅಷ್ಟಕ್ಕಷ್ಟೇ ಎಂಬಂತಾಗಿದೆ. ಕೃಷ್ಣಬೈರೇಗೌಡ ಅವರು ಸಚಿವರಾದ ಬಳಿಕ ಪಕ್ಷ ಸಂಘಟನೆ ದೃಷ್ಟಿಯಿಂದ ಯಾವ ಕೆಲಸಗಳು ಆಗಿಲ್ಲ. ಇನ್ನು ಮುಂದೆಯೂ ಬೇರೆ ಜಿಲ್ಲೆಯವರಿಗೆ ಅವಕಾಶ ಕಲ್ಪಿಸಿದರೆ ಮುಂಬರುವ ಚುನಾವಣೆಗಳ ಮೇಲೆ ಹೊಡೆತ ಬೀಳುತ್ತದೆ. ಸ್ಥಳೀಯ ಶಾಸಕರೇ ಉಸ್ತುವಾರಿ ಹೊಣೆ ಹೊತ್ತರೆ ಅಭಿವೃದ್ಧಿ ಕಾರ್ಯಗಳಿಗೆ ವೇಗ ಸಿಗುವುದರ ಜೊತೆಗೆ ಪಕ್ಷದ ಸಂಘಟನೆಯೂ ಬಲಗೊಳ್ಳಲಿದೆ ಎಂಬ ಅಭಿಪ್ರಾಯ ವ್ಯಕ್ತವಾಗಿದೆ.

ಕೆ.ಎಂ. ಶಿವಲಿಂಗೇಗೌಡ ಅವರು ಕರ್ನಾಟಕ ಗೃಹ ಮಂಡಳಿ ಅಧ್ಯಕ್ಷರಾಗಿದ್ದ ಅವಧಿಯಲ್ಲಿ ಕೈಗೊಂಡಿರುವ ಕಾರ್ಯಚಟುವಟಿಕೆಗಳು ಹಾಗು ಆಡಳಿತ ಅನುಭವವನ್ನು ಹೈಕಮಾಂಡ್ ನಾಯಕರು ಪರಿಶೀಲಿಸುತ್ತಿದ್ದಾರೆ ಎನ್ನಲಾಗುತ್ತಿದೆ. ಸಚಿವ ಸ್ಥಾನ ಅಥವಾ ಜಿಲ್ಲಾ ಉಸ್ತುವಾರಿ ಹೊಣೆ ನೀಡುವ ಸಂದರ್ಭದಲ್ಲಿ ಅವರ ಕಾರ್ಯಕ್ಷಮತೆ, ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷದ ಸಂಘಟನೆಗೆ ನೀಡಿರುವ ಕೊಡುಗೆ ಮತ್ತು ಭವಿಷ್ಯದ ರಾಜಕೀಯ ಸಮೀಕರಣಗಳನ್ನು ಗಮನದಲ್ಲಿಟ್ಟುಕೊಳ್ಳುವ ಸಾಧ್ಯತೆ ಇದೆ.

# ಆಲೂರು ದ್ವಿಪಥ ಮುಖ್ಯ ರಸ್ತೆ ಕಾಮಗಾರಿ ಪರಿಶೀಲನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ಹಲವು ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಪಟ್ಟಣದ ದ್ವಿಪಥ ಮುಖ್ಯರಸ್ತೆ ಕಾಮಗಾರಿ ಅಂತಿಮ ಹಂತ ತಲುಪಿದ್ದು ಶಾಸಕ ಸಿಮೆಂಟ್ ಮಂಜು ಪರಿಶೀಲಿಸಿದರು.

ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶೀಘ್ರದಲ್ಲೇ ರಸ್ತೆ ವಾಹನ ಸಂಚಾರಕ್ಕೆ ಮುಕ್ತವಾಗಲಿದೆ. ರಾಷ್ಟ್ರೀಯ ಹೆದ್ದಾರಿ ಬೈರಾಪುರ ಭಾಗದಿಂದ ಆಲೂರು ಪಟ್ಟಣದ ಮೂಲಕ ಯಡೂರು ಸಮೀಪ ಮತ್ತೆ ಹೆದ್ದಾರಿಗೆ ಸಂಪರ್ಕ ಕಲ್ಪಿಸುವ ರಸ್ತೆ ಅಭಿವೃದ್ಧಿ ಕಾಮಗಾರಿ ವೇಗವಾಗಿ ಸಾಗುತ್ತಿದೆ ಎಂದು ಹೇಳಿದರು.

ಕಾಮಗಾರಿ ಪೂರ್ಣಗೊಂಡ ನಂತರ ಸಾರ್ವಜನಿಕರಿಗೆ ಸುಗಮ ಹಾಗೂ ಸುರಕ್ಷಿತ ಸಂಚಾರ ವ್ಯವಸ್ಥೆ ದೊರೆಯಲಿದ್ದು, ಬಹುಕಾಲದ ಬೇಡಿಕೆ ಈಡೇರಿದಂತಾಗಲಿದೆ. ಈ ರಸ್ತೆಯಲ್ಲಿ ಏಕಪಥ ಸಂಚಾರ ಮಾತ್ರ ಇದ್ದುದರಿಂದ ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದರು. ವಾಹನ ದಟ್ಟಣೆ ಹೆಚ್ಚುವುದರ ಜೊತೆಗೆ ಅಪಘಾತ ಪ್ರಮಾಣವೂ ಏರಿಕೆಯಾಗಿತ್ತು. ಶಾಸಕನಾಗಿ ಆಯ್ಕೆಯಾದ ಬಳಿಕ ರಸ್ತೆ ದ್ವಿಪಥಗೊಳಿಸುವ ಅಗತ್ಯವನ್ನು ಸರ್ಕಾರದ ಗಮನಕ್ಕೆ ತಂದು ಅನುದಾನ ಮಂಜೂರು ಮಾಡಿಸಿಕೊಂಡಿದ್ದಾಗಿ ಸಿಮೆಂಟ್ ಮಂಜು ಹೇಳಿದರು.

ಏಕಪಥ ರಸ್ತೆಯ ಕಾರಣದಿಂದ ಹಿಂದೆ ಅನೇಕ ಅಪಘಾತಗಳು ಸಂಭವಿಸಿ ಕೆಲವರು ಪ್ರಾಣ ಕಳೆದುಕೊಂಡಿದ್ದಾರೆ. ಮತ್ತೆ ಕೆಲವರು ಗಂಭೀರ ಗಾಯಗೊಂಡಿದ್ದಾರೆ. ಕಾಮಗಾರಿ ವೇಳೆ ರಸ್ತೆ ಬದಿಯಲ್ಲಿದ್ದ ಮರ, ವಿದ್ಯುತ್ ಕಂಬ ಹಾಗೂ ಪರಿವರ್ತಕಗಳನ್ನು ಅಗತ್ಯಕ್ಕೆ ಅನುಗುಣವಾಗಿ ಸ್ಥಳಾಂತರಿಸಲಾಗಿದೆ. ಕಾಮಗಾರಿ ಆರಂಭವಾದ ಬಳಿಕ ಆರ್ಥಿಕ ಪರಿಸ್ಥಿತಿಗಳ ಪರಿಣಾಮವಾಗಿ ಡಾಂಬರು ಸೇರಿ ನಿರ್ಮಾಣ ಸಾಮಾಗ್ರಿಗಳ ಬೆಲೆಯಲ್ಲಿ ಏರಿಕೆ ಕಂಡುಬಂದಿದ್ದರಿಂದ ಕೆಲ ಹಂತಗಳಲ್ಲಿ ಕಾಮಗಾರಿ ನಿಧಾನಗೊಂಡಿತ್ತು ಎಂದು ವಿವರಿಸಿದರು.

ರಸ್ತೆ ಅಭಿವೃದ್ಧಿಯಲ್ಲಿ ಪರಿಸರ ಸಂರಕ್ಷಣೆಯತ್ತ ವಿಶೇಷ ಗಮನ ಹರಿಸಲಾಗಿದ್ದು, ರಸ್ತೆಯ ಮಧ್ಯಭಾಗದಲ್ಲಿ ಗಿಡಗಳನ್ನು ನೆಟ್ಟು ಆಕರ್ಷಕ ಹಾಗು ಪರಿಸರ ಸ್ನೇಹಿ ರಸ್ತೆ ನಿರ್ಮಾಣಕ್ಕೆ ಆದ್ಯತೆ ನೀಡಲಾಗಿದೆ ಎಂದು ತಿಳಿಸಿದರು.

ಲೋಕೋಪಯೋಗಿ ಇಲಾಖೆ ಕಿರಿಯ ಎಂಜಿನಿಯರ್ ಮಧು, ಇಲಾಖೆ ಅಧಿಕಾರಿಗಳು, ಸ್ಥಳೀಯರು ಹಾಜರಿದ್ದರು.

# ಕೋಳಿ ಸಾಕಾಣಿಕೆದಾರರಿಗೆ ಅನ್ಯಾಯವಾಗಲ್ಲ: ಭರವಸೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕೋಳಿ ಸಾಕಾಣಿಕೆದಾರರಿಗೆ ಅನುಕೂಲವಾಗುವ ನಿಟ್ಟನಲ್ಲಿ ಹೆಚ್ಚಿಸಿರುವ ಪ್ರತಿ ಕೆ.ಜಿ.ಗೆ 10 ರೂ. ದರವನ್ನುಖಂಡಿತವಾಗಿ ಕೊಡಿಸಲಾಗುವುದು. ಈ ವಿಚಾರದಲ್ಲಿ ಫಲಾನುಭವಿಗಳಿಗೆ ಅನ್ಯಾಯವಾಗುವುದಿಲ್ಲವೆಂದು ಪಶುಪಾಲನಾ ಇಲಾಖೆ ರಾಜ್ಯ ಆಯುಕ್ತೆ ಶಿಲ್ಪಾನಾಗ್ ಭರವಸೆ ನೀಡಿದರು.

ಬೆಂಗಳೂರಿನ ಪಶು ಭವನದಲ್ಲಿ ಅಖಿಲ ಕರ್ನಾಟಕ ಕೋಳಿ ಸಾಕಾಣಿಕೆ ಮುಖಂಡರೊಂದಿಗೆ ಮಾತನಾಡಿದ ಅವರು, ಯಾವುದೇ ಕಂಪನಿಗಳ ಒತ್ತಡಕ್ಕೆ ಮಣಿಯದೆ ರಾಜ್ಯದ ಕೋಳಿ ಸಾಕಾಣಿಕೆ ರೈತರಿಗೆ ಹತ್ತು ರೂಪಾಯಿ ಕೊಡಿಸಲಾಗುವುದು. ಈ ಘೋಷಣೆ ಸುಳ್ಳು, ತಪ್ಪು ಮಾಹಿತಿ ಹರಡಲಾಗುತ್ತಿದೆ. ಅದಕ್ಕೆ ಕೋಳಿ ಸಾಕಾಣಿಕೆದಾರರು ಕಿವಿಗೊಡಬಾರದೆಂದು ಅಭಯ ನೀಡಿದರು.

ಶೀಘ್ರದಲ್ಲೇ ಕಂಪನಿಯವರೊಂದಿಗೆ ಸಭೆ ನಡೆಸಿ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು. ರಾಜ್ಯದ ರೈತರು ಭಯಪಡಬಾರದು. ಕೋಳಿ ಸಾಕಾಣಿಕೆ ಉದ್ದಿಮೆ ಮುಂದುವರೆಸಬೇಕು ಎಂದು ಸಲಹೆ ನೀಡಿದರು.

ಸಭೆಯಲ್ಲಿ ಅಖಿಲ ಕರ್ನಾಟಕ ರಾಜ್ಯ ಕೋಳಿ ಸಾಕಾಣಿಕೆ ರೈತರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯಾಧ್ಯಕ್ಷ ಚಂದ್ರಶೇಖರ್ ಹಾಸನ, ಗೌರವ ಅಧ್ಯಕ್ಷ ಹೊಸಕೋಟೆ ಮಾರಣ್ಣ, ಮುಖಂಡರಾದ ಕೋಲಾರದ ಶ್ರೀಧರ ರೆಡ್ಡಿ, ಮುನೇಗೌಡ, ಕೊಳತೂರ್ ಕೃಷ್ಣಪ್ಪ, ಶೆಟ್ಟಿಹಳ್ಳಿ ನಂಜುಂಡಪ್ಪ, ನಾರಾಯಣಸ್ವಾಮಿ, ರಾಜಶೇಖರ್ ಮತ್ತಿತರರಿದ್ದರು.

# ಎನ್.ಆರ್.ಸಂತೋಷ್ ಅವರಿಂದ ಗ್ರಾಮದಲ್ಲಿ ಗುಂಪುಗಾರಿಕೆ: ಆರೋಪ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಗ್ರಾಮಸ್ಥರಲ್ಲೇ ಗುಂಪುಗಾರಿಕೆ ಮಾಡಿ ರಾಜಕೀಯ ಬೇಳೆ ಬೇಯಿಸಿಕೊಳ್ಳುವ ಪ್ರಯತ್ನವನ್ನು ಜೆಡಿಎಸ್ ಮುಖಂಡ ಎನ್.ಆರ್.ಸಂತೋಷ್ ಮಾಡುತ್ತಿದ್ದಾರೆಂದು ತಾಲ್ಲೂಕಿನ ಗಂಡಸಿ ಗ್ರಾಮಸ್ಥರು ಆರೋಪಿಸಿದ್ದಾರೆ.

ಭಾನುವಾರ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಗಂಡಸಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ನಾಗರಾಜು, ದೇವರ ಹೆಸರಿನಲ್ಲಿ ರಾಜಕಾರಣ ಮಾಡುವುದು, ಗ್ರಾಮಸ್ಥರ ನಡುವೆ ಗುಂಪುಗಾರಿಕೆ ಮಾಡಿ ಅಶಾಂತಿ ಸೃಷ್ಟಿಸುವುದು ಸಭ್ಯ ರಾಜಕಾರಣಿಯ ಲಕ್ಷಣವಲ್ಲ. ಲಾಳನಕೆರೆ ಗ್ರಾಮ ದೇವತೆ ಕಾಳಿಕಾಂಬ ದೇವಾಲಯದ ಅಭಿವೃದ್ಧಿಗೆ 10 ಲಕ್ಷ ರೂ. ದೇಣಿಗೆ ವಿಷಯಕ್ಕೆ ಸಂಬಂಧಿಸಿ ಅವರದ್ದೇ ಪಕ್ಷದ ಮತ್ತೊಂದು ಬಣದ ಮುಖಂಡ ಯೋಗೀಶ್ ಅವರಿಗೆ 10 ಲಕ್ಷ ರೂ. ಹಣ ನೀಡಿರುವುದಾಗಿ ಯುವಕನೊಂದಿಗೆ ಸಂತೋಷ್ ಮಾತನಾಡಿದ್ದಾರೆ. ನಂತರ ಯೋಗೀಶ್ ಎಂಬಾತನನ್ನು ಕಂಬಕ್ಕೆ ಕಟ್ಟಿ ಹೊಡೆಯಿರಿ, ಬೆಂಕಿ ಹಚ್ಚಿರಿ ಎಂದು ಎನ್.ಆರ್.ಸಂತೋಷ್ ಪ್ರಚೋದಿಸಿದ್ದಾರೆ. ಹೀಗೆಲ್ಲಾ ಮಾತನಾಡಿರುವ ಆಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ. ರಾಜಕೀಯ ಲಾಭಕ್ಕಾಗಿ ಗ್ರಾಮಸ್ಥರ ನಡುವೆ ಕಲಹ ಸೃಷ್ಟಿಸುವುದು ಸಂತೋಷ್‌ಗೆ ಕರಗತವಾಗಿದೆ. ಈ ಪ್ರಕರಣದಲ್ಲಿ ಶಾಸಕ ಶಿವಲಿಂಗೇಗೌಡರ ಹೆಸರು ಕೆಡಿಸುವ ವ್ಯವಸ್ಥಿತ ಪಿತೂರಿ ನಡೆಯುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.



ದೇವಾಲಯಕ್ಕೆ ಸೇರಬೇಕಿದ್ದ 10 ಲಕ್ಷ ರೂ. ಎಲ್ಲಿ ಎಂದು ಗ್ರಾಮದ ಯೋಗೀಶ್ ಅವರನ್ನು ಕೇಳಿದಾಗ ಸಂತೋಷ್ ಕೈಗೆ 4 ಲಕ್ಷ ರೂ.ಗಳನ್ನು ನಗರದ ವರ್ತಕರೊಬ್ಬರಿಂದ ನಾಲ್ಕಾರು ಜನರ ಎದುರು ಕೊಡಿಸಿದ್ದೆ. ಉಳಿದ 6 ಲಕ್ಷ ರೂ. ಹಣವನ್ನು ನನಗೆ ನೀಡಿಲ್ಲ. ಈ ಬಗ್ಗೆ ನಾನು ಪ್ರಮಾಣ ಮಾಡಲು ಗ್ರಾಮದ ಕಾಳಿಕಾಂಬ ದೇವಾಲಯದಲ್ಲಿ ಕರ್ಪೂರ ಹಚ್ಚುವುದಾಗಿ ಹೇಳಿದ್ದರು. ಅದರಂತೆ ಎನ್.ಆರ್. ಸಂತೋಷ್ ಹಾಗೂ ಯೋಗೀಶ್ ದೇವಸ್ಥಾನಕ್ಕೆ ಬಂದಾಗ ಜೋರು ಗಲಾಟೆಯಾಗಿತ್ತು ಎಂದರು.

ಆ ದಿನ ನಡೆದ ಸಭೆಯಲ್ಲಿ ಸಂತೋಷ್ ಅವರ ಕಡೆಯಿಂದ 4 ಲಕ್ಷ ರೂ. ದೇವಾಲಯಕ್ಕೆ ಬಂದಿದ್ದು ಉಳಿದ 6 ಲಕ್ಷ ರೂ. ತಲುಪಿರುವುದಕ್ಕೆ ಸ್ಪಷ್ಟ ಉತ್ತರ ಸಿಗದೇ ಇದ್ದಿದ್ದರಿಂದ ಸಹಜವಾಗಿ ಗ್ರಾಮಸ್ಥರು ಸಂತೋಷ್‌ಗೆ ಘೇರಾವು ಹಾಕಿದ್ದರು. ಈ ಸಂದರ್ಭದಲ್ಲಿ ಪೊಲೀಸರು ಸಹ ಇದ್ದರೆಂದರು.

### ಶಿವಲಿಂಗೇಗೌಡರ ಹೆಸರು ಕೆಡಿಸುವ ಯತ್ನ

ಆ ದಿನ ಗ್ರಾಮದಲ್ಲಿ ನಡೆದ ರಾಜಿ ಪಂಚಾಯಿತಿ ಸುಖಾಂತ್ಯ ಕಂಡಿರಲಿಲ್ಲ. ಆದರೆ ಆ ಬಳಿಕ ಎನ್.ಆರ್. ಸಂತೋಷ್ ಹಾಗೂ ಬೆಂಬಲಿಗರು ಈ ವಿವಾದದಲ್ಲಿ ಶಾಸಕ ಕೆ.ಎಂ.ಶಿವಲಿಂಗೇಗೌಡರ ಹೆಸರು ತಳುಕು ಹಾಕಲಾಗುತ್ತಿದೆ.

ಮುಖ್ಯಮಂತ್ರಿ ಬದಲಾವಣೆ, ಸಚಿವ ಸಂಪುಟ ವಿಸ್ತರಣೆ ಹಿನ್ನಲೆಯಲ್ಲಿ ಶಾಸಕರು ಬೆಂಗಳೂರಿನಲ್ಲಿದ್ದಾರೆ. ಇಂತಹ ಸಂದರ್ಭದಲ್ಲಿ ಲಾಳನಕೆರೆ ದೇವಸ್ಥಾನದ ಹೆಸರಲ್ಲಿ ನಡೆದಿರುವ ಅವ್ಯವಹಾರದಲ್ಲಿ ಶಾಸಕರ ಹೆಸರು ಬಳಸಿಕೊಳ್ಳಲಾಗುತ್ತಿದೆ. ಶಿವಲಿಂಗೇಗೌಡರ ಹೆಸರನ್ನು ಎಳೆದು ತರುವ ಮೂಲಕ ನೀತಿಗೆಟ್ಟ ರಾಜಕಾರಣ ಮಾಡುತ್ತಿದ್ದಾರೆಂದರು.

ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಆಗ್ರೋ ಬಾಬು, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಮಾಜಿ ಅಧ್ಯಕ್ಷ ಜಯರಾಂ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಮಾಜಿ ನಿರ್ದೇಶಕ ರಾಮಚಂದ್ರ, ನಾಗೇನಹಳ್ಳಿ ವೆಂಕಟೇಶ್, ಪರಮೇಶ್ ಮತ್ತಿತರರಿದ್ದರು.

# ಇತಿಹಾಸದಲ್ಲಿ ಈ ದಿನ

## ಜೂನ್-16

1903: ವಾಹನ ತಯಾರಿಕಾ ಸಂಸ್ಥೆಯಾದ ಫೋರ್ಡ್ ಮೋಟಾರ್ ಕಂಪನಿ ಸ್ಥಾಪನೆಯಾಯಿತು.

1911: ರ ನಂತರ ಐಬಿಎಂ ಆಗಿ ಬೆಳೆದ ಕಂಪನಿಯ ಆರಂಭಿಕ ರೂಪವಾದ ಕಂಪ್ಯೂಟಿಂಗ್-ಟ್ಯಾಬ್ಯುಲೇಟಿಂಗ್-ರೆಕಾರ್ಡಿಂಗ್ ಕಂಪನಿ ನೋಂದಣಿಯಾಯಿತು.

1963: ವ್ಯಾಲೆಂಟಿನಾ ತೆರೆಶ್ಕೋವಾ ಬಾಹ್ಯಾಕಾಶಕ್ಕೆ ತೆರಳಿದ ವಿಶ್ವದ ಮೊದಲ ಮಹಿಳೆಯಾದರು.

1976: ದಕ್ಷಿಣ ಆಫ್ರಿಕಾದ ಸೊವೆಟೊ ವಿದ್ಯಾರ್ಥಿ ಹೋರಾಟ ವರ್ಣಭೇದ ವಿರೋಧಿ ಚಳವಳಿಯ ಪ್ರಮುಖ ಘಟ್ಟವಾಯಿತು.

2012: ಲಿಯು ಯಾಂಗ್ ಬಾಹ್ಯಾಕಾಶಕ್ಕೆ ತೆರಳಿದ ಚೀನಾದ ಮೊದಲ ಮಹಿಳೆಯಾದರು.


### ಜನನ

1971: ಖ್ಯಾತ ರ್ಯಾಪರ್ ಹಾಗೂ ನಟ ಟುಪಾಕ್ ಶಕುರ್

### ನಿಧನ

2017: ಜರ್ಮನಿಯ ಏಕೀಕರಣದ ಪ್ರಮುಖ ನಾಯಕ ಹಾಗೂ ಮಾಜಿ ಚಾನ್ಸಲರ್ ಹೆಲ್ಮುಟ್ ಕೋಲ್

# ಅಕ್ಷರದಿಂದ ಕಲಿತ ಜ್ಞಾನ ಎಂದಿಗೂ ನಾಶವಾಗಲ್ಲ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಯಾವುದಕ್ಕೆ ನಾಶವಿಲ್ಲವೋ ಅದೇ ಅಕ್ಷರ. ವ್ಯಕ್ತಿ ನಾಶವಾಗಬಹುದು, ಆದರೆ ಆತ ಅಕ್ಷರದ ಮುಖಾಂತರ ಗಳಿಸುವ ಜ್ಞಾನ ಎಂದಿಗೂ ನಾಶವಾಗುವುದಿಲ್ಲ. ಪೋಷಕರು ಮಕ್ಕಳ ಆಸಕ್ತಿ ಅರಿತು ಕಲಿಯಲು ಮುಕ್ತ ಅವಕಾಶ ಕಲ್ಪಿಸಬೇಕೆಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ಹೆಚ್.ಎಲ್.ಮಲ್ಲೇಶಗೌಡ ಅಭಿಪ್ರಾಯಪಟ್ಟರು.

ತಾಲ್ಲೂಕಿನ ಹಲ್ಮಿಡಿ ಗ್ರಾಮದ ಶಿಲಾಶಾಸನ ಮಂಟಪದಲ್ಲಿ ಭಾನುವಾರ ಆಯೋಜಿಸಿದ್ದ ಸ್ಕಾಲರ್ಸ್ ಶಾಲೆಯ 15ನೇ ವರ್ಷದ ಅಕ್ಷರಾಭ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಜಗತ್ತಿಗೆ ಜ್ಞಾನ ಮತ್ತು ವಿವೇಕವನ್ನು ನೀಡಿದ ಶ್ರೇಷ್ಠ ಭಾಷೆ ಕನ್ನಡ. ಬರವಣಿಗೆಯನ್ನು ರೂಪಿಸಿಕೊಳ್ಳುವ ಭಾಷೆಗಳಲ್ಲಿ ಶ್ರೇಷ್ಟ ತತ್ವವನ್ನು ಹೊಂದಿರುವ ಕನ್ನಡ ಭಾಷೆ ಮೊದಲು ಅರಳಿದ ಐತಿಹಾಸಿಕ ಸ್ಥಳವಿದು. ಇಂತಹ ಪುಣ್ಯ ಸ್ಥಳದಲ್ಲಿ ಮಕ್ಕಳಿಗೆ ಅಕ್ಷರಾಭ್ಯಾಸ ಮಾಡಿಸುತ್ತಿರುವ ಪೋಷಕರೇ ಧನ್ಯರು. ವಿದ್ಯಾರ್ಥಿಗಳು ಕೇವಲ ಶಾಲೆಯಿಂದ ಮಾತ್ರವಲ್ಲದೆ, ಶಿಕ್ಷಕರು, ಪೋಷಕರು ಹಾಗೂ ತಮ್ಮ ಸುತ್ತಲಿನ ಪರಿಸರದಿಂದಲೂ ಜ್ಞಾನದ ಅರಿವನ್ನು ಪಡೆಯುತ್ತಾರೆ. ಹೀಗಾಗಿ ಅವರಿಗೆ ಉತ್ತಮ ಮಾರ್ಗದರ್ಶನ ನೀಡುವ ಕೆಲಸವಾಗಬೇಕೆಂದು ಕಿವಿಮಾತು ಹೇಳಿದರು. ಶಾಲೆಯ ಆಡಳಿತಾಧಿಕಾರಿ ಡಾ. ಹೆಚ್.ಎನ್.ಚಂದ್ರಶೇಖರ್ ಮಾತನಾಡಿ, ಎಲ್ಲಾ ಮಕ್ಕಳ ನಾಲಿಗೆಯಲ್ಲಿ ಸದಾ ಸರಸ್ವತಿಯು ನಲಿದಾಡುವಂತಾಗಲಿ ಎಂದು ಶುಭ ಕೋರಿದರು.

### 85 ವಿದ್ಯಾರ್ಥಿಗಳಿಗೆ ಅಕ್ಷರ ದೀಕ್ಷೆ

ಭಾರತೀಯ ಸಂಸ್ಕೃತಿಯಲ್ಲಿ ಶಿಕ್ಷಣ ಪದ್ಧತಿಗೆ ತನ್ನದೇ ಆದ ಅರ್ಥಪೂರ್ಣ ಸಂಸ್ಕಾರ ಹಾಗೂ ಸುಂದರ ಚೌಕಟ್ಟಿದೆ. ಗುರು-ಶಿಷ್ಯರ ನಡುವಿನ ಅವಿನಾಭಾವ ಸಂಬಂಧಕ್ಕೆ ಪ್ರೀತಿ ಮತ್ತು ಭಕ್ತಿಯ ಬಂಧವಿದೆ. ಇಂತಹ ವಿದ್ಯಾಭ್ಯಾಸವನ್ನು ಮಂಗಳ ಮುಹೂರ್ತದಲ್ಲಿ ಆರಂಭಿಸುವ ಪವಿತ್ರ ಟಿಅಕ್ಷರಾಭ್ಯಾಸಟಿ ಕಾರ್ಯಕ್ರಮದಲ್ಲಿ ಸ್ಕಾಲರ್ಸ್ ಶಾಲೆಗೆ ಹೊಸದಾಗಿ ದಾಖಲಾದ 85 ವಿದ್ಯಾರ್ಥಿಗಳಿಗೆ ಅತಿಥಿಗಳಿಂದ ಅಕ್ಷರಾಭ್ಯಾಸ ಮಾಡಿಸಲಾಯಿತು. ಅದಕ್ಕೂ ಮೊದಲು ಶಾರದಾಂಬೆಯನ್ನು ಸ್ಮರಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಶಾಲೆಯ ಆಡಳಿತ ಮಂಡಳಿ ಕಾರ್ಯದರ್ಶಿ ಮಮತಾ ಚಂದ್ರಶೇಖರ್, ಶಿಕ್ಷಕರು, ಬೋಧಕೇತರ ಸಿಬ್ಬಂದಿ ಹಾಜರಿದ್ದರು.

# ಜೂ.17 ರಂದು ಕಬ್ಬಳಿಯಲ್ಲಿ ಪ್ರತಿಭಾ ಪುರಸ್ಕಾರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಚನ್ನರಾಯಪಟ್ಟಣ: ತಾಲ್ಲೂಕಿನ ಕಬ್ಬಳಿ ಶ್ರೀ ಬಸವೇಶ್ವರಸ್ವಾಮಿ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಜೂ.17 ರಂದು ಪ್ರತಿಭಾ ಪುರಸ್ಕಾರ ಆಯೋಜಿಸಲಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ ಹಿರೀಸಾವೆ ಹೋಬಳಿ ಘಟಕದ ಅಧ್ಯಕ್ಷ ಹೆಚ್.ಎ.ಪ್ರಮೋದ್ ಹೇಳಿದರು. ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಲಿದ್ದು, ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ನಡೆಯಲಿದೆ. ಕಬ್ಬಳಿ ಶಾಖಾಮಠದ ಶ್ರೀ ಶಿವಪುತ್ರನಾಥ ಸ್ವಾಮೀಜಿ ಉಪಸ್ಥಿತಿ ಇರಲಿದ್ದಾರೆ ಎಂದರು.

ಹಿರೀಸಾವೆ ಹೋಬಳಿ ವ್ಯಾಪ್ತಿಯ ಸರ್ಕಾರಿ ಹಾಗೂ ಖಾಸಗಿ ಪ್ರೌಢಶಾಲೆಗಳಲ್ಲಿ 2026-27ನೇ ಸಾಲಿನ ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ ಕನ್ನಡ ವಿಷಯದಲ್ಲಿ 125ಕ್ಕೆ 125 ಅಂಕಗಳನ್ನು ಪಡೆದಿರುವ ಮತ್ತು ಅತಿ ಹೆಚ್ಚು ಅಂಕ ಪಡೆದಿರುವ ತಲಾ ಒಬ್ಬರಂತೆ ವಿದ್ಯಾರ್ಥಿಗಳು ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿರುವ ಒಟ್ಟು 20 ವಿದ್ಯಾರ್ಥಿಗಳಿಗೆ ಅಭಿನಂದಿಸಲಾಗುವುದು ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಹೆಚ್.ಹೆಚ್.ಸತೀಶ್, ವಿಶ್ರಾಂತ ಪಾಂಶುಪಾಲ ಪ್ರೊ. ಎನ್.ತಮ್ಮಣ್ಣಗೌಡ, ಕಸಾಪ ನಿಕಟಪೂರ್ವ ಅಧ್ಯಕ್ಷ ಡಾ.ಹೆಚ್.ಪಿ ಶಂಕರ್, ಮಾಜಿ ಅಧ್ಯಕ್ಷ ಹೆಚ್.ಇ.ಬೋರಣ್ಣ, ಬಸವೇಶ್ವರಸ್ವಾಮಿ ಆಂಗ್ಲ ಮಾಧ್ಯಮ ಶಾಲೆಯ ಮುಖ್ಯಶಿಕ್ಷಕ ಟಿ.ತಿಮ್ಮೇಗೌಡ ಇತರರಿದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248